**Akashvani : Bangalore**
**National Bulletin In Kannada**
**10.06.2024 / 13.10 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**10.06.2024 / 13.10 hrs**

**<><*<><>*><>**

## ಮುಖ್ಯಾಂಶಗಳು

**೧. ಪಿಎಂ ಕಿಸಾನ್ ಯೋಜನೆಯಡಿ ೯ ಕೋಟಿ ೩೦ ಲಕ್ಷ ರೈತರಿಗೆ ೨೦ ಸಾವಿರ ಕೋಟಿ ರೂಪಾಯಿ ಬಿಡುಗಡೆ**

**೨. ಜಾಗತಿಕ ಶಾಂತಿ, ಪ್ರಗತಿ ಹಾಗೂ ಸಮೃದ್ಧಿ ಸರ್ಕಾರದ ಆದ್ಯತೆ - ಪ್ರಧಾನಿ ನರೇಂದ್ರ ಮೋದಿ**

**೩. ಸಮರ್ಥವಾಗಿ ಸಚಿವ ಸ್ಥಾನದ ಜವಾಬ್ದಾರಿ ನಿರ್ವಹಣೆ - ವಿ. ಸೋಮಣ್ಣ**

**೪. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ : ಇಂದು ದಕ್ಷಿಣ ಆಫ್ರಿಕಾ-ಬಾಂಗ್ಲಾದೇಶ ಮುಖಾಮುಖಿ**

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅಧಿಕಾರ ವಹಿಸಿಕೊಂಡ ನಂತರ ಪಿಎಂ ಕಿಸಾನ್ ನಿಧಿ ಹಣ ಬಿಡುಗಡೆಗೆ ಅನುಮೋದನೆ ನೀಡಿದ್ದಾರೆ. ಈ ಮೂಲಕ ಮೊದಲ ನಿರ್ಧಾರ ಸರ್ಕಾರದ ಬದ್ಧತೆಯ ಪ್ರತೀಕವಾಗಿದೆ ಎಂದು ಅವರು ಹೇಳಿದ್ದಾರೆ. ಮುಂಬರುವ ದಿನಗಳಲ್ಲಿ ರೈತರು ಮತ್ತು ಕೃಷಿ ವಲಯದ ಶ್ರೇಯೋಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡುವುದಾಗಿ ಅವರು ತಿಳಿಸಿದ್ದಾರೆ. ೧೭ನೇ ಕಂತಿನಲ್ಲಿ ೯ ಕೋಟಿ ೩೦ ಲಕ್ಷ ರೈತರಿಗೆ ೨೦ ಸಾವಿರ ಕೋಟಿ ರೂಪಾಯಿ ನೆರವನ್ನು ಬಿಡುಗಡೆ ಮಾಡಲಾಗಿದೆ. ಈ ಕುರಿತ ಕಡತಕ್ಕೆ ಸಹಿ ಹಾಕಿದ ಪ್ರಧಾನಿ ನರೇಂದ್ರ ಮೋದಿ ರೈತರ ಕಲ್ಯಾಣ ತಮ್ಮ ಸರ್ಕಾರದ ಆದ್ಯತೆಯಾಗಿದೆ ಎಂದು ಅವರು ತಿಳಿಸಿದ್ದಾರೆ.

**<><*<><>*><>**

ತಮ್ಮ ಮೂರನೇ ಅವಧಿಯಲ್ಲಿ ಜಾಗತಿಕ ಶಾಂತಿ, ಪ್ರಗತಿ ಮತ್ತು ಸಮೃದ್ಧಿಗಾಗಿ ಕಾರ್ಯ ನಿರ್ವಹಿಸುವುದನ್ನು ಮುಂದುವರೆಸುವುದಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಏಷ್ಯಾ ವಲಯದಲ್ಲಿ ಜನರಿಂದ ಜನರ ನಡುವಿನ ಬಾಂಧವ್ಯ ಮತ್ತು ಸಂಪರ್ಕವನ್ನು ಮತ್ತಷ್ಟು ವ್ಯಾಪಕಗೊಳಿಸಲು ನೆರೆ-ಹೊರೆ ರಾಷ್ಟ್ರಗಳು ಮುಂದಾಗಬೇಕೆಂದು ಕರೆ ನೀಡಿದ್ದಾರೆ. ಕಳೆದ ರಾತ್ರಿ ನರೇಂದ್ರ ಮೋದಿ ಅವರು, ಜಾಗತಿಕ ನಾಯಕರನ್ನು ರಾಷ್ಟ್ರಪತಿ ಭವನದಲ್ಲಿ ಭೇಟಿ ಮಾಡಿ ಔಪಚಾರಿಕ ಮಾತುಕತೆ ನಡೆಸಿದರು. ನೆರೆ-ಹೊರೆ ರಾಷ್ಟ್ರಗಳಿಗೆ ತಮ್ಮ ಪ್ರಧಾನ ಆದ್ಯತೆ, ಜಾಗತಿಕ ದಕ್ಷಿಣ ಭಾಗಕ್ಕೆ ಭಾರತ ಧ್ವನಿಯಾಗಿ ಕಾರ್ಯನಿರ್ವಹಿಸಲಿದೆ ಎಂದು ತಿಳಿಸಿದ್ದಾರೆ. ನರೇಂದ್ರ ಮೋದಿ ಅವರು, ಮೂರನೇ ಬಾರಿಗೆ ಅಧಿಕಾರದ ಚುಕ್ಕಾಣಿ ಹಿಡಿದ ಸಂದರ್ಭದಲ್ಲಿ ವಿದೇಶಿ ಗಣ್ಯರು ಭಾಗವಹಿಸಿರುವುದು ಭಾರತದ ವಿದೇಶಾಂಗ ನೀತಿಗೆ ಅನುಗುಣವಾಗಿದೆ. ಈ ರಾಷ್ಟ್ರಗಳೊಂದಿಗೆ ಭಾರತ ತನ್ನ ಆಳವಾದ ಬಾಂಧವ್ಯ

ಹೊಂದಿದ್ದು, ಈ ವಲಯದ ಶ್ರೇಯೋಭಿವೃದ್ಧಿಗೆ ಕಟಿಬದ್ಧವಾಗಿ ಕಾರ್ಯನಿರ್ವಹಿಸುವುದಾಗಿ ತಿಳಿಸಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸಹ ವಿದೇಶಿ ಗಣ್ಯರಿಗೆ ರಾಷ್ಟ್ರಪತಿ ಭವನದಲ್ಲಿ ಔತಣಕೂಟ ಏರ್ಪಡಿಸಿದ್ದರು. ಪ್ರಮಾಣವಚನ ಕಾರ್ಯಕ್ರಮ ದೇಶದ ಜನತೆಗೆ ಹೆಮ್ಮೆಯ ಜೊತೆಗೆ ಜಗತ್ತಿನಾದ್ಯಂತ ಸ್ಫೂರ್ತಿಗೆ ಕಾರಣವಾಗಿದೆ ಎಂದು ರಾಷ್ಟ್ರಪತಿ ಅವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು, ತಮಗೆ ಸಚಿವ ಸ್ಥಾನದ ಮಹತ್ವದ ಜವಾಬ್ದಾರಿ ನೀಡಿದ್ದು, ಅದನ್ನು ಸಮರ್ಥವಾಗಿ ನಿಭಾಯಿಸಲಾಗುವುದು ಎಂದು ನೂತನ ಸಚಿವ ವಿ. ಸೋಮಣ್ಣ ಹೇಳಿದ್ದಾರೆ. ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೂತನ ಸಚಿವರು ತಮ್ಮ ಸ್ವಕ್ಷೇತ್ರಗಳಿಗೆ ತೆರಳಲು ಆದ್ಯತೆ ನೀಡದೆ ಕಚೇರಿಯಲ್ಲಿ ಕುಳಿತು ಕೆಲಸ ಮಾಡುವಂತೆ ಕಿವಿ ಮಾತು ಹೇಳಿದ್ದಾರೆ. ಅವರ ನಿರೀಕ್ಷೆಗೆ ತಕ್ಕಂತೆ ತಮಗೆ ವಹಿಸುವ ಜವಾಬ್ದಾರಿಯನ್ನು ಪ್ರಾಮಾಣಿಕತೆಯಿಂದ ನಿರ್ವಹಿಸುತ್ತೇನೆ ಎಂದರು. ನಂತರ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಸೇರಿದಂತೆ ಹಲವು ಮುಖಂಡರನ್ನು ಭೇಟಿ ಮಾಡಿ ಅವರು ಮಾತುಕತೆ ನಡೆಸಿದರು.

<><*<><>*><>

ವಿವಿಧ ರಾಜ್ಯಗಳಲ್ಲಿ ತೆರವಾಗಿದ್ದ ೧೩ ವಿಧಾನಸಭಾ ಕ್ಷೇತ್ರಗಳಿಗೆ ಉಪ ಚುನಾವಣೆ ಘೋಷಣೆಯಾಗಿದೆ. ಬಿಹಾರದ ರೂಪೌಲಿ, ಪಶ್ಚಿಮ ಬಂಗಾಳದ ರಾಯ್‌ಗಂಜ್, ರಂಗಟ್ ದಕ್ಷಿಣ್, ಬಾಗ್ದಾ, ಮಾಣಿಕ್‌ತಾಳ, ತಮಿಳುನಾಡಿನ ವಿಕ್ರವಂಡಿ, ಮಧ್ಯಪ್ರದೇಶದ ಅಮರ್‌ವಾರ್, ಉತ್ತರಾಖಂಡದ ಮಂಗ್ಲೂರು, ಬದ್ರಿನಾಥ್, ಪಂಜಾಬ್‌ನ ಜಲಂದರ್ ಪೂರ್ವ, ಹಿಮಾಚಲ ಪ್ರದೇಶದ ಡೆಹ್ರಾ, ಹಮೀರ್‌ಪುರ್, ನಲಘರ್ ಕ್ಷೇತ್ರಗಳಿಗೆ ಜುಲೈ ೧೩ ರಂದು ಮತದಾನವಾಗಲಿದೆ. ಈ ತಿಂಗಳ ೧೪ ರಂದು ಅಧಿಸೂಚನೆ ಹೊರಬೀಳಲಿದ್ದು, ನಾಮಪತ್ರ ಸಲ್ಲಿಕೆಗೆ ೨೧ ಕಡೆಯ ದಿನವಾಗಿದೆ. ೨೪ ರಂದು ಪರಿಶೀಲನೆ ಹಾಗೂ ೨೬ ರಂದು ನಾಮಪತ್ರ ವಾಪಸ್ ಪಡೆಯಲು ಕಡೆಯ ದಿನವಾಗಿದೆ.

<><*<><>*><>

ನಿನ್ನೆ ಸಂಜೆ ಜಮ್ಮು ಮತ್ತು ಕಾಶ್ಮೀರದ ರಿಯಾಸಿ ಜಿಲ್ಲೆಯ ತೇರ್ಯಾತ್ ಗ್ರಾಮದ ಬಳಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಬಸ್ ಒಂದು ಪ್ರಪಾತಕ್ಕೆ ಉರುಳಿದ ಪರಿಣಾಮ ಕನಿಷ್ಠ ಒಂಬತ್ತು ಯಾತ್ರಾರ್ಥಿಗಳು ಮೃತಪಟ್ಟಿದ್ದು, ೩೩ ಮಂದಿ ಗಾಯಗೊಂಡಿದ್ದಾರೆ. ಯಾತ್ರಾರ್ಥಿಗಳು ಪ್ರಯಾಣಿಸುತ್ತಿದ್ದ ವಾಹನವು ಶಿವ ಖೋರಿ ಗುಹಾ ದೇಗುಲದಿಂದ ಕತ್ರಾಕ್ಕೆ ಹಿಂತಿರುಗುತ್ತಿತ್ತು. ಗಾಯಾಳುಗಳನ್ನು ತೇರಿಯಾತ್, ರಿಯಾಸಿ ಮತ್ತು ಜಮ್ಮುವಿನ ಆಸ್ಪತ್ರೆಗಳಿಗೆ ಚಿಕಿತ್ಸೆಗಾಗಿ ಕರೆದೊಯ್ಯಲಾಗಿದೆ. ರಾಷ್ಟ್ರೀಯ ತನಿಖಾ ಸಂಸ್ಥೆ ಹಾಗು ವಿಧಿವಿಜ್ಞಾನ ತಂಡವು ಘಟನಾ ಸ್ಥಳಕ್ಕೆ ಆಗಮಿಸಿ ಸಾಕ್ಷ್ಯ ಸಂಗ್ರಹ ಮಾಡಲು ಪ್ರಯತ್ನಿಸುತ್ತಿದೆ ಎಂದು ಮೂಲಗಳು ತಿಳಿಸಿದೆ. ದಾಳಿಯನ್ನು ಕೇಂದ್ರ ಸಚಿವ ಅಮಿತ್ ಶಾ ಖಂಡಿಸಿದ್ದಾರೆ. ಅವರು ಜಮ್ಮು ಮತ್ತು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮತ್ತು ಡಿಜಿಪಿ ಅವರೊಂದಿಗೆ ಮಾತನಾಡಿ ಘಟನೆಯ ಬಗ್ಗೆ ಮಾಹಿತಿ ಪಡೆದುಕೊಂಡರು. ಈ ಭೀಕರ ದಾಳಿ ಕೋರರನ್ನು ಬಿಡುವುದಿಲ್ಲ ಮತ್ತು ಅವರು ಕಾನೂನಿನ ಕ್ರಮಗಳನ್ನು ಎದುರಿಸಬೇಕಾಗುತ್ತದೆ ಎಂದು ಹೇಳಿದ್ದಾರೆ. ಯಾತ್ರಿಕರ ಮೇಲಿನ ದಾಳಿ ಅತ್ಯಂತ ಖಂಡನೀಯ ಎಂದು

ಹೇಳಿರುವ ಕೇಂದ್ರ ಸಚಿವ ರಾಜನಾಥ್ ಸಿಂಗ್ ಗಾಯಾಳುಗಳು ಶೀಘ್ರ ಗುಣಮುಖರಾಗಲಿ ಎಂದು ಹಾರೈಸಿದ್ದಾರೆ. ಜಮ್ಮು ಮತ್ತು ಕಾಶ್ಮೀರದಲ್ಲಿ ಯಾತ್ರಿಕರ ಬಸ್ ಮೇಲೆ ನಡೆದ ಭಯೋತ್ಪಾದಕ ದಾಳಿಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಖಂಡಿಸಿದ್ದಾರೆ. ಯಾತ್ರಾರ್ಥಿಗಳನ್ನು ಹೊತ್ತೊಯ್ಯುತ್ತಿದ್ದ ಬಸ್ಸಿನ ಮೇಲೆ ನಡೆದ ಭಯೋತ್ಪಾದಕ ದಾಳಿ ಹೀನ ಕೃತ್ಯ ಮತ್ತು ಮಾನವೀಯತೆಯ ವಿರುದ್ಧದ ಅಪರಾಧವಾಗಿದೆ ಎಂದು ಅವರು ಹೇಳಿದ್ದಾರೆ. ಗಾಯಾಳುಗಳು ಶೀಘ್ರ ಗುಣಮುಖವಾಗಲಿ ಎಂದು ಪ್ರಾರ್ಥಿಸಿರುವ ರಾಷ್ಟ್ರಪತಿ ಅವರು, ಸಂತ್ರಸ್ತರ ಕುಟುಂಬಗಳೊಂದಿಗೆ ರಾಷ್ಟ್ರ ನಿಂತಿದೆ ಎಂದಿದ್ದಾರೆ.

<><*<><>*><>

ಸಿಕ್ಕಿಂ ಮುಖ್ಯಮಂತ್ರಿಯಾಗಿ ಸಿಕ್ಕಿಂ ಕ್ರಾಂತಿಕಾರಿ ಮೋರ್ಚಾ ಮುಖ್ಯಸ್ಥ ಪ್ರೇಮ್ ಸಿಂಗ್ ತಮಾಂಗ್ ಇಂದು ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಸಂಜೆ ೪ ಗಂಟೆಗೆ ಗ್ಯಾಂಗ್‌ಟಾಕ್‌ನ ಪಲ್ಜಾರ್ ಕ್ರೀಡಾಂಗಣದಲ್ಲಿ ನಡೆಯಲಿದೆ. ಗ್ಯಾಂಗ್‌ಟಾಕ್‌ನಲ್ಲಿ ಶಾಲಾ-ಕಾಲೇಜುಗಳಿಗೆ ಇಂದು ರಜೆ ಘೋಷಿಸಲಾಗಿದೆ. ಸಮಾರಂಭದಲ್ಲಿ ರಾಜ್ಯಪಾಲ ಲಕ್ಷ್ಮಣ ಪ್ರಸಾದ್ ಆಚಾರ್ಯ ಅವರು, ಪ್ರೇಮ್ ಸಿಂಗ್ ತಮಾಂಗ್ ಹಾಗೂ ನೂತನ ಸಚಿವರಿಗೆ ಪ್ರಮಾಣವಚನ ಬೋಧಿಸಲಿದ್ದಾರೆ. ಲೋಕಸಭಾ ಚುನಾವಣೆಯೊಂದಿಗೆ ಏಕಕಾಲದಲ್ಲಿ ನಡೆದಿದ್ದ ಸಿಕ್ಕಿಂ ವಿಧಾನಸಭಾ ಚುನಾವಣೆಯಲ್ಲಿ ಒಟ್ಟು ೩೨ ಸ್ಥಾನಗಳಲ್ಲಿ ೩೧ ಸ್ಥಾನಗಳನ್ನು ಸಿಕ್ಕಿಂ ಕ್ರಾಂತಿಕಾರಿ ಮೋರ್ಚಾ ಗೆದ್ದುಕೊಂಡಿದ್ದು, ಪ್ರೇಮ್‌ಸಿಂಗ್ ತಮಾಂಗ್, ಎರಡನೇ ಅವಧಿಗೆ ಮುಖ್ಯಮಂತ್ರಿಯಾಗಲಿದ್ದಾರೆ.

<><*<><>*><>

ಒಡಿಶಾದಲ್ಲಿ ಬಿಜೆಪಿ ಸರ್ಕಾರದ ನೂತನ ಮುಖ್ಯಮಂತ್ರಿ ಪ್ರಮಾಣವಚನ ಸಮಾರಂಭ ಇದೇ ೧೨ ರಂದು ನಡೆಯಲಿದೆ. ಈ ಹಿಂದೆ ಪ್ರಮಾಣವಚನ ಸಮಾರಂಭವು ಇಂದು ನಿಗದಿಯಾಗಿತ್ತು. ಭುವನೇಶ್ವರದ ಜನತಾ ಮೈದಾನದಲ್ಲಿ ಸಮಾರಂಭಕ್ಕೆ ಸಿದ್ಧತೆ ಕೈಗೊಳ್ಳಲಾಗಿದೆ. ೭೮ ಸದಸ್ಯರ ಬಿಜೆಪಿ ಶಾಸಕಾಂಗ ಪಕ್ಷದ ಸಭೆಯಲ್ಲಿ ಕೇಂದ್ರ ವೀಕ್ಷಕರ ಸಮ್ಮುಖದಲ್ಲಿ ಶಾಸಕಾಂಗ ಪಕ್ಷದ ನಾಯಕನ ಆಯ್ಕೆ ಅಂತಿಮಗೊಳ್ಳಲಿದೆ. ಮುಖ್ಯಮಂತ್ರಿ ಸ್ಥಾನಕ್ಕೆ ಬಿಜೆಪಿ ಹಿರಿಯ ನಾಯಕರಾದ ಸುರೇಶ್ ಪೂಜಾರಿ ಮೋಹನ್ ಚರಣ್ ಮಾಜಿ ಮತ್ತು ಕೆ.ವಿ. ಸಿಂಗ್ ಡಿಯೊ ಅವರ ಹೆಸರುಗಳು ಪ್ರಮುಖವಾಗಿ ಕೇಳಿ ಬರುತ್ತಿವೆ. ಇತ್ತೀಚೆಗೆ ನಡೆದ ಒಡಿಶಾ ವಿಧಾನಸಭೆ ಚುನಾವಣೆಯಲ್ಲಿ ಸುದೀರ್ಘವಾಗಿ ಆಡಳಿತ ನಡೆಸಿದ್ದ ಬಿಜೆಡಿ ಪಕ್ಷವನ್ನು ಹಿಂದಿಕ್ಕಿ ಬಿಜೆಪಿ ಭರ್ಜರಿ ಜಯ ದಾಖಲಿಸಿತ್ತು.

<><*<><>*><>

ಒಡಿಶಾದಲ್ಲಿ ಶಾಸಕಾಂಗ ಪಕ್ಷದ ನಾಯಕರನ್ನು ಆಯ್ಕೆ ಮಾಡಲು ಕೇಂದ್ರ ಸಚಿವರಾದ ರಾಜನಾಥ್ ಸಿಂಗ್ ಮತ್ತು ಭೂಪೇಂದರ್ ಯಾದವ್ ಅವರನ್ನು ಬಿಜೆಪಿ ತನ್ನ ಕೇಂದ್ರ ವೀಕ್ಷಕರನ್ನಾಗಿ ನೇಮಿಸಿದೆ. ರಾಜ್ಯದಲ್ಲಿ ಶಾಸಕಾಂಗ ಪಕ್ಷದ ನಾಯಕರ ಆಯ್ಕೆಯ ಮೇಲ್ವಿಚಾರಣೆಗಾಗಿ ಸಂಸದೀಯ ಮಂಡಳಿಯು ಈ ಇಬ್ಬರು ನಾಯಕನನ್ನು ಆಯ್ಕೆ ಮಾಡಿದೆ ಎಂದು ಬಿಜೆಪಿ ತಿಳಿಸಿದೆ. ಬಿಜೆಪಿ ಶಾಸಕಾಂಗ ಪಕ್ಷದ ನಾಯಕರನ್ನು ಆಯ್ಕೆ ಮಾಡಲು ನಾಳೆ ಸಭೆ ಸೇರುವ ಸಾಧ್ಯತೆ ಇದೆ. ರಾಜ್ಯದ ಮೊದಲ ಬಿಜೆಪಿ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕಾರ ಸಮಾರಂಭ ಭುವನೇಶ್ವರದ ಜನತಾ ಮೈದಾನದಲ್ಲಿ ಬುಧವಾರ ನಡೆಯಲಿದ್ದು, ಸಿದ್ಧತೆಗಳು ಭರದಿಂದ ಸಾಗಿವೆ. ೧೪೭ ಸದಸ್ಯ ಬಲದ ವಿಧಾನ ಸಭೆಯಲ್ಲಿ

ಬಿಜೆಪಿ ೭೮ ಸ್ಥಾನಗಳನ್ನು ಗೆದ್ದು, ರಾಜ್ಯದಲ್ಲಿ ಮೊದಲ ಬಾರಿಗೆ ಬಹುಮತ ಗಳಿಸಿದೆ. ಮುಖ್ಯಮಂತ್ರಿ ನವೀನ್ ಪಟ್ನಾಯಕ್ ನೇತೃತ್ವದಲ್ಲಿ ಬಿಜು ಜನತಾ ದಳದ ೨೪ ವರ್ಷಗಳ ಆಡಳಿತ ಈ ಮೂಲಕ ಕೊನೆಗೊಂಡಿದೆ.

**<><*<><>*><>**

ಆಕಾಶವಾಣಿ ದ್ವಿಭಾಷಾ ನೇರ ಫೋನ್‌ಇನ್ ಕಾರ್ಯಕ್ರಮ ಪಬ್ಲಿಕ್ ಸ್ಪೀಕ್ ಅಡಿ ಸುಸ್ಥಿರ ಭವಿಷ್ಯಕ್ಕಾಗಿ ತ್ಯಾಜ್ಯ ನಿರ್ವಹಣೆ ಕುರಿತ ಚರ್ಚೆ ಇಂದು ರಾತ್ರಿ ೯.೩೦ಕ್ಕೆ ಪ್ರಸಾರವಾಗಲಿದೆ. ಡಾ. ಸುನೀಲ್ ಪಾಂಡೆ, ಆರ್ಥಿಕ ತಜ್ಞ ಮತ್ತು ತ್ಯಾಜ್ಯ ನಿರ್ವಹಣೆ ತಜ್ಞರಾದ ಸ್ವಾತಿ ಸಿಂಗ್ ಸಂಬ್ಯಾಲ್, ಚರ್ಚೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ತ್ಯಾಜ್ಯ ಮರುಬಳಕೆ, ವಿಲೇವಾರಿ ಸೇರಿದಂತೆ ತ್ಯಾಜ್ಯದ ನಿರ್ವಹಣೆ ಕುರಿತಾಗಿ ಶ್ರೋತೃಗಳಿಗೆ ಪ್ರಶ್ನೆ ಕೇಳಿ ಉತ್ತರ ಪಡೆಯುವ ಅವಕಾಶವಿರುತ್ತದೆ. ಇದಕ್ಕಾಗಿ ಇಂದು ರಾತ್ರಿ ೯.೩೦ರ ನಂತರ ೦೧೧-೨೩೪೨೧೦೫೦ ಮತ್ತು ೦೧೧-೨೩೩೧೪೪೪೪ ದೂರವಾಣಿ ಸಂಖ್ಯೆಗಳಿಗೆ ಕರೆ ಮಾಡಿ ಅಥವಾ ವಾಟ್ಸ್‌ಪ್ ಸಂಖ್ಯೆ ೯೨೮೯೦೯೪೦೪೪ ಗೆ ಸಂಪರ್ಕಿಸಿ ಪ್ರಶ್ನೆಗಳನ್ನು ಕೇಳಬಹುದು. ಈ ನೇರ ಪ್ರಸಾರ ಆಕಾಶವಾಣಿ ಗೋಲ್ಡ್ ಚಾನೆಲ್ ಮತ್ತು ಹೆಚ್ಚುವರಿ ತರಂಗಾಂತರಗಳಲ್ಲಿ ಲಭ್ಯವಿರುತ್ತದೆ. ಇದಲ್ಲದೇ ನ್ಯೂಸ್ ಆನ್ ಏರ್ ಡಾಟ್ ಜಿಒವಿ ಡಾಟ್ ಇನ್ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಅಫಿಶಿಯಲ್ ಯುಟ್ಯೂಬ್ ಚಾನೆಲ್‌ನಲ್ಲಿಯೂ ಕಾರ್ಯಕ್ರಮ ಲಭ್ಯವಿರುತ್ತದೆ.

**<><*<><>*><>**

ಇಂದು ಗೋವಾ, ಮಹಾರಾಷ್ಟ್ರ ಮತ್ತು ಕರ್ನಾಟಕದ ಕೆಲವು ಭಾಗಗಳಲ್ಲಿ ಭಾರೀ ಮಳೆಯ ಕಾರಣ ಭಾರತೀಯ ಹವಾಮಾನ ಇಲಾಖೆ -ಐಎಂಡಿ ಕೆಂಪು ಎಚ್ಚರಿಕೆ ನೀಡಿದೆ. ಮುಂದಿನ ೩ ರಿಂದ ೪ ದಿನಗಳಲ್ಲಿ ಕರ್ನಾಟಕ, ಕೇರಳ, ಲಕ್ಷದ್ವೀಪ ಮತ್ತು ಆಂಧ್ರಪ್ರದೇಶದಲ್ಲಿ ಗುಡುಗು, ಮಿಂಚು ಮತ್ತು ಬಿರುಗಾಳಿ ಸಹಿತ ಹಗುರದಿಂದ ಸಾಧಾರಣ ಮಳೆಯಾಗಲಿದೆ ಎಂದು ಅದು ತಿಳಿಸಿದೆ. ಇದರ ನಡುವೆ ಪಂಜಾಬ್, ಹರಿಯಾಣ, ಬಿಹಾರ, ಜಾರ್ಖಂಡ್, ಪಶ್ಚಿಮ ಬಂಗಾಳ, ಹಿಮಾಚಲ ಪ್ರದೇಶ, ಉತ್ತರಾಖಂಡ, ದೆಹಲಿ, ರಾಜಸ್ಥಾನ ಮತ್ತು ಮಧ್ಯಪ್ರದೇಶದ ಕೆಲವು ಭಾಗಗಳಲ್ಲಿ ಈ ತಿಂಗಳ ೧೩ ರವರೆಗೆ ಶಾಖದ ಅಲೆಯು ಮುಂದುವರಿಯುತ್ತದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಮುಂದಿನ ೪ ದಿನಗಳಲ್ಲಿ ವಾಯುವ್ಯ ಮತ್ತು ಮಧ್ಯ ಭಾರತದಲ್ಲಿ ಗರಿಷ್ಠ ತಾಪಮಾನವು ೨ ರಿಂದ ೩ ಡಿಗ್ರಿ ಸೆಲ್ಸಿಯಸ್‌ಗಳಷ್ಟು ಹೆಚ್ಚಾಗುವ ನಿರೀಕ್ಷೆಯಿದೆ.

**<><*<><>*><>**

ನ್ಯೂಯಾರ್ಕ್‌ನ ನಸ್ಸೌ ಕೌಂಟಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ ಟೂರ್ನಿಯ 'ಡಿ' ಗುಂಪಿನ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ಹಾಗೂ ಬಾಂಗ್ಲಾದೇಶ ಮುಖಾಮುಖಿಯಾಗಲಿದೆ. ಪಂದ್ಯ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ನಿನ್ನೆ ನಡೆದ 'ಎ' ಗುಂಪಿನ ಎರಡನೇ ಮಹತ್ವದ ಪಂದ್ಯದಲ್ಲಿ ಭಾರತ, ತನ್ನ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನ ತಂಡವನ್ನು ೬ ರನ್‌ಗಳ ಅಂತರದಲ್ಲಿ ಮಣಿಸಿ ರೋಚಕ ಜಯ ಸಾಧಿಸಿದೆ. ಭಾರತದ ಬೌಲರ್ ಜಸ್ಪ್ರೀತ್ ಬೂಮ್ರಾ ಅವರ ಮಾರಕ ದಾಳಿ ಪಾಕಿಸ್ತಾನಕ್ಕೆ ಮುಳುವಾಯಿತು. ಮೊದಲು ಬ್ಯಾಟ್ ಮಾಡಿದ ಭಾರತ ೧೯ ಓವರ್‌ಗಳಲ್ಲಿ ೧೧೯ ರನ್‌ಗಳಿಗೆ ಆಲೌಟಾಯಿತು.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೨.೩೦ ಕ್ಕೆ <>*><>